**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.06.2026 / 18.40 hrs**

---

ಮುಖ್ಯಾಂಶಗಳು

೧. ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಬಾಕಿ ಉಳಿದಿರುವ ಕೆಲಸಗಳನ್ನು ೨೫ ದಿನಗಳಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಗಡುವು

೨. ಹೊಸಪೇಟೆಯಲ್ಲಿ ನಾಳೆ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

೩. ರಾಜ್ಯದ ಆರ್ಥಿಕತೆ ಕುರಿತಂತೆ ಶ್ವೇತಪತ್ರ ಹೊರಡಿಸಿ; ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹ

೪. ಕೆಆರ್‌ಎಸ್‌ನಲ್ಲಿ ನೀರಿನ ಕೊರತೆ ಇಲ್ಲ; ಬೆಂಗಳೂರು, ಕಾವೇರಿ ಜಲಾನಯನ ಪ್ರದೇಶದಲ್ಲಿ ಆತಂಕ ಬೇಡ - ಶಾಸಕ ರಮೇಶ್ ಬಂಡಿಸಿದ್ದೇಗೌಡ

೫. ರಾಜ್ಯದ ಕರಾವಳಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ವ್ಯಾಪಕ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ

---

ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಬಾಕಿ ಉಳಿದಿರುವ ಕೆಲಸಗಳನ್ನು ೨೫ ದಿನಗಳಲ್ಲಿ ಪೂರ್ಣಗೊಳಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿಂದು ಅಧಿಕಾರಿಗಳ ಜೊತೆ ಸಭೆ ನಡೆಸಿ, ಮಾತನಾಡಿದ ಅವರು, ಆಡಳಿತಕ್ಕೆ ಚುರುಕು ಮುಟ್ಟಿಸುವಂತೆ ಸಲಹೆ ನೀಡಿದ್ದಾರೆ. ಒತ್ತಡಕ್ಕೆ ಮಣಿಯದೆ, ಕಾನೂನು ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸುವಂತೆ ತಿಳಿಸಿದ್ದಾರೆ. ಜಿಲ್ಲೆಗಳ ಪ್ರತಿಯೊಂದು ಸಮಸ್ಯೆಗಳನ್ನು ಪಟ್ಟಿಮಾಡಿ, ಸಲ್ಲಿಸಿ, ಜಿಲ್ಲಾ ಉಸ್ತುವಾರಿ ಸಚಿವರು ಆ ಬಗ್ಗೆ ಗಮನಹರಿಸುವಂತೆ ಸೂಚಿಸಲಾಗುವುದು ಎಂದು ಹೇಳಿದ್ದಾರೆ.

ಆರ್ಥಿಕ ವ್ಯವಸ್ಥೆಯ ಮಿತಿಯೊಳಗೆ ಯಾವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂಬುದರ ಪಟ್ಟಿಯನ್ನು ಸಲ್ಲಿಸುವಂತೆ ಮುಖ್ಯಮಂತ್ರಿ ನಿರ್ದೇಶನ ನೀಡಿದ್ದಾರೆ.

ರಾಜ್ಯದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯಿಂದ ಯಾರೂ ಮತದಾನದ ಹಕ್ಕು ಕಳೆದುಕೊಳ್ಳಬಾರದು ಎಂದು ತಿಳಿಸಿದ್ದಾರೆ. ಇದೇ ವೇಳೆ ಸಾರ್ವಜನಿಕರ ಕುಂದುಕೊರತೆ ಆಲಿಸಿ, ಸ್ಪಂದಿಸಲು ಅನಿವಾಸಿ ಭಾರತೀಯರಿಗಾಗಿ ಎರಡು ಪ್ರತ್ಯೇಕ ಸಚಿವಾಲಯಗಳನ್ನು ಆರಂಭಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ರೌಡಿಗಳ ನಿಯಂತ್ರಣಕ್ಕೆ ತಾಲೂಕು ಮಟ್ಟದಲ್ಲಿ ಪ್ರತ್ಯೇಕ ಪಡೆ ರಚಿಸಲು ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

****ಧ್ವನಿ**** ಡಿ.ಕೆ. ಶಿವಕುಮಾರ್

ಗೃಹ ಜ್ಯೋತಿ ಉಚಿತ ವಿದ್ಯುತ್ ಯೋಜನೆ ಮತ್ತು ಮಹಿಳಾ ಮನೆ ಮುಖ್ಯಸ್ಥರಿಗೆ ಮಾಸಿಕ ೨,೦೦೦ ರೂಪಾಯಿ ನೆರವು ನೀಡುವ ಗೃಹ ಲಕ್ಷ್ಮಿ ಯೋಜನೆಯಡಿಯಲ್ಲಿ ದುರುಪಯೋಗದ ಆರೋಪದ ದೂರುಗಳು ಮತ್ತು ಅರ್ಜಿಗಳ ಹಿನ್ನೆಲೆಯಲ್ಲಿ ಸರ್ಕಾರ ಖಾತರಿ ಯೋಜನೆಗಳ ಫಲಾನುಭವಿಗಳ ವಿವರವಾದ ಮಾಹಿತಿಯನ್ನು ಸಂಗ್ರಹಿಸುತ್ತಿದೆ ಎಂದು  ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತಿಳಿಸಿದ್ದಾರೆ.

---

ಸರ್ಕಾರದ ಯೋಜನೆಗಳು ನಿಗದಿತ ಸಮಯದೊಳಗೆ ಜನರಿಗೆ ತಲುಪಲು ಜವಾಬ್ದಾರಿ ಮತ್ತು ಪಾರದರ್ಶಕವಾಗಿ ಕೆಲಸ ಮಾಡಬೇಕು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುವ ಪೀಳಿಗೆಯ ಅಪೇಕ್ಷೆಯಂತೆ ಆಡಳಿತ ನೀಡಬೇಕು ಎಂದು ಸರ್ಕಾರದ ದೃಷ್ಟಿಕೋನವಾಗಿದೆ. ಎಲ್ಲಾ ಮಾನದಂಡಗಳಲ್ಲಿಯೂ ಕರ್ನಾಟಕ ಅಗ್ರಸ್ಥಾನದಲ್ಲಿರಬೇಕು ಎಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದ್ದಾರೆ.

---

ಕೇಂದ್ರ ಹಣಕಾಸು ಹಾಗೂ ಕಾರ್ಪೋರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಯಾದಗಿರಿ ಜಿಲ್ಲೆಯ ಬದ್ದೆಪಲ್ಲಿಯಲ್ಲಿ ಕೃಷಿ ಸಂಸ್ಕರಣೆಯ ರೈತ ತರಬೇತಿ ಕೇಂದ್ರ ಉದ್ಘಾಟಿಸಿದರು. ಕಲ್ಯಾಣ ಸಂಪದ ಯೋಜನೆಯಡಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಂಸದರ ಅಭಿವೃದ್ಧಿ ಯೋಜನೆಯ ಭಾಗವಾಗಿ ಕೃಷಿ ಸಂಸ್ಕರಣೆ ಮತ್ತು ಗ್ರಾಮೀಣ ಉದ್ಯಮಶೀಲತೆಗೆ ಉತ್ತೇಜನ ನೀಡುವ ಮಹತ್ವದ ಯೋಜನೆ ಇದಾಗಿದೆ.

ನಿರ್ಮಲಾ ಸೀತಾರಾಮನ್ ಅವರು ಘಟಕವನ್ನು ವೀಕ್ಷಿಸಿ, ಸಂಸ್ಕರಣ ಘಟಕ ನಿರ್ವಹಿಸುವ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರೊಡನೆ ಸಂವಾದ ನಡೆಸಿದರು.

ಬಳಿಕ ಮಾತನಾಡಿದ ಅವರು, ಯಾದಗಿರಿ ಜಿಲ್ಲೆಯಲ್ಲಿ ಶೇಂಗಾ ಮೌಲ್ಯವರ್ಧನೆ ಮತ್ತು ರೈತರ ಆದಾಯ ಹೆಚ್ಚಿಸಲು ಕೇಂದ್ರ ಸರ್ಕಾರ ಒತ್ತು ನೀಡಲಿದೆ ಎಂದು ತಿಳಿಸಿದರು.

ಹಣಕಾಸು ಸಚಿವರು ನಾಳೆ ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಬಳಿಕ ತುಂಗಭದ್ರಾ ಜಲಾಶಯ ರಸ್ತೆಯಲ್ಲಿ ನಿರ್ಮಾಣವಾಗಲಿರುವ ನೂತನ ರಂಗಮಂದಿರಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ರಾಜ್ಯದಲ್ಲಿ ಪ್ರಥಮ ಬಾರಿಗೆ ಜಪಾನ್ ಮಾದರಿಯಲ್ಲಿ ನಿರ್ಮಾಣವಾಗುತ್ತಿರುವ ಮಿಯಾವಾಕಿ, ವಿವಿಧ ತೋಟಗಾರಿಕಾ ಬೆಳೆಗಳ ಅರಣ್ಯೀಕರಣ ಕಾರ್ಯಕ್ರಮದಲ್ಲೂ ನಿರ್ಮಲಾ ಸೀತಾರಾಮನ್ ಭಾಗವಹಿಸಲಿದ್ದಾರೆ.

---

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸರ್ಕಾರ ರಾಹುಲ್ ಗಾಂಧಿ ಹಾಗೂ ಸಿದ್ದರಾಮಯ್ಯ ಅವರ ರಿಮೋಟ್ ಕಂಟ್ರೋಲ್‌ನಿಂದ ನಡೆಯಲಿದೆ ಎಂದು ಪ್ರತಿ ಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಪುತ್ರ ಯತೀಂದ್ರ ಸಚಿವರಾಗಿ ಬಂದಿದ್ದಾರೆಯೇ ಹೊರತು, ಹೊಸದೇನು ಇಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ನಿನ್ನೆ ನಡೆದ ಪದಗ್ರಹಣ ಕಾರ್ಯಕ್ರಮದಲ್ಲಿ ಮಹಿಳೆಯರಿಗೆ ಅವಕಾಶ ನೀಡದಿರುವುದು ಕಾಂಗ್ರೆಸ್‌ನ ಮಹಿಳಾ ವಿರೋಧಿ ನೀತಿಗೆ ಸಾಕ್ಷಿಯಾಗಿದೆ. ರಾಜ್ಯದ ಆರ್ಥಿಕತೆ ಕುರಿತಂತೆ ಶ್ವೇತಪತ್ರ ಹೊರಡಿಸುವಂತೆ ಆರ್. ಅಶೋಕ ಆಗ್ರಹಿಸಿದ್ದಾರೆ.

---

ಬೆಂಗಳೂರು, ಮಂಡ್ಯ ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದಲ್ಲಿ ಕುಡಿಯಲು ಹಾಗೂ ಬೆಳೆ ಬೆಳೆಯಲು ಯಾವುದೇ ನೀರಿನ ಸಮಸ್ಯೆ ಇಲ್ಲ ಎಂದು ಶ್ರೀರಂಗಪಟ್ಟಣ ಶಾಸಕ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ತಿಳಿಸಿದ್ದಾರೆ.

ಕೆ.ಆರ್.ಎಸ್ ಅಣೆಕಟ್ಟೆಗೆ ಭೇಟಿ ನೀಡಿ, ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಗಾರು ವಿಳಂಬವಾಗಿದ್ದರೂ ಅಣೆಕಟ್ಟೆಯಲ್ಲಿ ೭೨ ಅಡಿ ನೀರಿದೆ ಎಂದು ಹೇಳಿದ್ದಾರೆ. ಹೀಗಾಗಿ ಬೆಂಗಳೂರಿಗೆ ಕುಡಿಯುವ ನೀರಿನ ಯಾವುದೇ ಸಮಸ್ಯೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ನೀರಿನ ಒಳ ಹರಿವು ಉತ್ತಮ ಪ್ರಮಾಣದಲ್ಲಿದ್ದು, ಕನ್ನಂಬಾಡಿ ಕಟ್ಟೆಯ ಕೆಳಗಿರುವ ಯಾವುದೇ ಹಳ್ಳಿಗೂ ನೀರಿನ ಕೊರತೆಯಾಗುವುದಿಲ್ಲ. ಮೈಸೂರಿನ ಆನೇ ಹಂತಕ್ಕೆ ೧೬೦ ಕ್ಯೂಸೆಕ್ ನೀರು ಬಳಕೆಯಾಗುತ್ತಿದ್ದು, ಮಂಡ್ಯ ಜಿಲ್ಲೆಗೆ ಕುಡಿಯಲು ಹಾಗೂ ಬೆಳೆಗಳಿಗೆ ಯಾವುದೇ ಸಮಸ್ಯೆಯಾಗುವುದಿಲ್ಲ ಎಂದು ಹೇಳಿದ್ದಾರೆ.

---

ಬ್ರ್ಯಾಂಡ್ ಬೆಂಗಳೂರು ದೃಷ್ಟಿಕೋನವನ್ನು ಸಾಕಾರಗೊಳಿಸುವ ಹಾಗೂ ಬೆಂಗಳೂರು ನಗರದ ಭವಿಷ್ಯದ ಸವಾಲುಗಳನ್ನು ಎದುರಿಸಬಲ್ಲ ಸುಸ್ಥಿರ ನಗರಾಭಿವೃದ್ಧಿಗೆ ಪೂರಕವಾದ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಬಿಡಬ್ಲ್ಯೂಎಸ್ಎಸ್‌ಬಿ, ಬೆಂಗಳೂರು ಗ್ಲೋಬಲ್ ವಾಟರ್ ಇನ್ನೋವೇಷನ್ ನೆಟ್ವರ್ಕ್ ಸ್ಥಾಪನೆಗೆ ಚಿಂತನೆ ನಡೆಸಿದೆ.

ಬಿ-ಗ್ವಿನ್, ಜಾಗತಿಕ ಮಟ್ಟದ ಅತ್ಯಾಧುನಿಕ ವೇದಿಕೆಯಾಗಿ ರೂಪುಗೊಂಡಿದ್ದು, ಜಲ ಮತ್ತು ಒಳಚರಂಡಿ ವಲಯದ ಸವಾಲುಗಳನ್ನು ಎದುರಿಸಲು ವಿಶ್ವದ ಜಲ ನಿರ್ವಹಣಾ ಸಂಸ್ಥೆಗಳು, ಸರ್ಕಾರಿ ಸಂಸ್ಥೆಗಳು, ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಗಳು, ಕೈಗಾರಿಕಾ ನಾಯಕರು, ನವೋದ್ಯಮಗಳು ಹಾಗೂ ನಾಗರಿಕರನ್ನು ಒಂದೇ ಸೂರಿನಡಿ ತರುವ ಪ್ರಮುಖ ಕೇಂದ್ರೀಕೃತವಾಗಿ ಕಾರ್ಯನಿರ್ವಹಿಸಲಿವೆ.

ಬೆಂಗಳೂರು ಜಲಮಂಡಳಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಇದು ಕೇವಲ ತಂತ್ರಜ್ಞಾನದ ಅಳವಡಿಕೆಯಲ್ಲ, ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳಿಗೆ ಪೂರಕವಾಗಿ ಮುಂದಿನ ಪೀಳಿಗೆಗೆ ಸುರಕ್ಷಿತ ಜಲ ಭವಿಷ್ಯ ನಿರ್ಮಿಸುವ ಅಚಲ ಬದ್ಧತೆಯಾಗಿದೆ ಎಂದು ಹೇಳಿದ್ದಾರೆ.

---

ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಸಮರ್ಪಕವಾಗಿ ನಡೆಸಲು ಅಗತ್ಯವಿರುವ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಚುನಾವಣಾ ಅಧಿಕಾರಿ ಹಾಗೂ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.

ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆ ಭೇಟಿ ನೀಡಿ, ನಮೂನೆಗಳ ಮೂಲಕ ಅಗತ್ಯ ಮಾಹಿತಿಗಳನ್ನು ಸಂಗ್ರಹಿಸಲಿದ್ದಾರೆ. ಇದಕ್ಕೆ ನಾಗರಿಕರು ಸಂಪೂರ್ಣ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.

ಚುನಾವಣಾ ಆಯೋಗದ ನಿರ್ದೇಶನದಂತೆ ಮೈಸೂರು ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದ್ದು, ಜಿಲ್ಲೆಯಲ್ಲಿ ಶೇಕಡ ೯೬ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಜಿ ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಕುರಿತಂತೆ ಈಗಾಗಲೇ ಶೇಕಡ ೯೦ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಆನಂದ.ಕೆ. ಸ್ಪಷ್ಟಪಡಿಸಿದ್ದಾರೆ. ಸಾರ್ವಜನಿಕರಲ್ಲಿ ಯಾವುದೇ ಗೊಂದಲಗಳಾಗದಂತೆ ಪಾರದರ್ಶಕವಾಗಿ ಎಸ್.ಐ.ಆರ್ ಪ್ರಕ್ರಿಯೆ ನಡೆಲಾಗುವುದು. ಮತದಾನದ ಹಕ್ಕಿನಿಂದ ಯಾರೊಬ್ಬರೂ ವಂಚಿತರಾಗಬಾರದು ಎಂದು ತಿಳಿಸಿದ್ದಾರೆ.

---

ನೈಋತ್ಯ ಮುಂಗಾರು ಕೇರಳಂ ಪ್ರವೇಶಿಸುವ ಹಿನ್ನೆಲೆಯಲ್ಲಿ ಕೇರಳಂ, ಕರಾವಳಿ, ಕರ್ನಾಟಕ ಸೇರಿದಂತೆ ಹಲವೆಡೆ ವ್ಯಾಪಕ ಮಳೆಯಾಗಲಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುಂಬರುವ ದಿನಗಳಲ್ಲಿ ಕರಾವಳಿ ಕರ್ನಾಟಕದಲ್ಲಿ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆ ಇದೆ. ಕರಾವಳಿ ಕರ್ನಾಟಕದ ಹೆಚ್ಚಿನ ಸ್ಥಳಗಳಲ್ಲಿ ಮತ್ತು ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ.

ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು, ಕೋಲಾರ ಜಿಲ್ಲೆಗಳಲ್ಲಿ ಭಾರೀ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗಲಿದೆ.

ಬೆಂಗಳೂರಿನಲ್ಲಿ ಭಾಗಶಃ ಮೋಡಕವಿದ ವಾತಾವರಣವಿದೆ. ಕೆಲವು ಪ್ರದೇಶಗಳಲ್ಲಿ ಹಗುರದಿಂದ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

---

ಮುಂಗಾರು ಆರಂಭದ ಹಿನ್ನೆಲೆಯಲ್ಲಿ ಮಳೆಗಾಲದ ಎದುರಾಗುವ ಪ್ರಾಕೃತಿಕ ವಿಕೋಪ ಎದುರಿಸಲು ದಕ್ಷಿಣ ಕನ್ನಡ ಜಿಲ್ಲಾಡಳಿತ ಸರ್ವಸನ್ನದ್ಧವಾಗಿದೆ ಎಂದು ಜಿಲ್ಲಾಧಿಕಾರಿ ದರ್ಶನ್ ಎಚ್.ವಿ.ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಆಯಾ ತಾಲೂಕಿನ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಮುಂಗಾರು ಕೇರಳಕ್ಕೆ ಪ್ರವೇಶವಾಗಿರುವುದರಿಂದ ಅಗತ್ಯ ಮುಂಜಾಗೃತೆಯನ್ನೂ ಈಗಿನಿಂದಲೇ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಮಳೆಗಾಲ ಆರಂಭವಾದ ಹಿನ್ನೆಲೆಯಲ್ಲಿ ಮಳೆಗಾಲದ ಅಗತ್ಯ ಕಾಮಗಾರಿ ಹೊರತುಪಡಿಸಿ ಯಾವುದೇ ಹೊಸ ರೀತಿಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದಂತೆ ಜಿಲ್ಲಾಧಿಕಾರಿ ದರ್ಶನ್ ಸ್ಪಷ್ಟ ಸೂಚನೆ ನೀಡಿದ್ದಾರೆ.

__________ ಮುಕ್ತಾಯ _________